ದಿ: 15/3/22 146 ಸೇರಿ ಪ್ರಶ್ನೆ-72 ಕ್ರ-10

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ. ಎಸ್.ವೀಣಾ ಅಚ್ಚಯ್ಯ ಇವರು ನಿಯಮ-72 ರಡಿಯಲ್ಲಿ "ಕೊಡಗು ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿ-ಮಾನವ ಸಂಘರ್ಷ ಮಿತಿ ಮೀರಿದ್ದು, ಹುಲಿ ಹಾಗೂ ಕಾಡಾನೆಗಳ ನಿರಂತರ ದಾಳಿಯಿಂದ ಜೀವಹಾನಿ, ಬೆಳೆಹಾನಿ ಹಾಗೂ ಜಾನುವಾರುಗಳ ಮೇಲಿನ ದಾಳಿಯಿಂದಾಗಿ ಜನರು ತತ್ತರಿಸಿ, ಪ್ರತಿನಿತ್ಯವೂ ಭಯದ ವಾತಾವರಣದಲ್ಲೇ ಬದುಕುತ್ತಿರುವ ಗಂಭೀರ ಸಮಸ್ಯೆ ಕುರಿತು" ಎಂಬುದರ ಬಗ್ಗೆ ಗಮನ ಸೆಳೆಯುವ ಸೂಚನೆಗೆ ಮಾನ್ಯ ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಹೇಳಿಕೆ.**

******

**ಉತ್ತರ:-**

ಅರಣ್ಯ ಇಲಾಖೆಯು ಕೊಡಗು ಜಿಲ್ಲೆಯಲ್ಲಿ ಮಾನವ-ಆನೆ ಸಂಘರ್ಷಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ವಹಿಸಲಾಗುತ್ತಿದೆ.

1. ಪ್ರಸಕ್ತ ಸಾಲಿನಲ್ಲಿ 51.37 ಕಿ.ಮೀ. ಸೋಲಾರ ತಂತಿ ಬೇಲಿ ನಿರ್ಮಾಣ ಕಾಮಗಾರಿ ಕೈಗೊಂಡಿದ್ದು ಕಾಮಗಾರಿಯು ಪ್ರಗತಿಯಲ್ಲಿದೆ.
2. ಅರಣ್ಯ ಅಂಚಿನ ಗ್ರಾಮಗಳಲ್ಲಿ ಆನೆಗಳು ಕಾಡಿನಿಂದ ನಾಡಿಗೆ ಬಾರದಂತೆ 45.41 ಕಿ.ಮೀ. ಆನೆ ತಡೆ ಕಂದಕ ನಿರ್ಮಾಣ ಕಾಮಗಾರಿ ಕೈಗೊಂಡಿದ್ದು ಕಾಮಗಾರಿಯು ಪ್ರಗತಿಯಲ್ಲಿದೆ.
3. ಅರಣ್ಯ ಅಂಚಿನ ಗ್ರಾಮಗಳಲ್ಲಿ ರೈತರಿಗೆ ಶೇ 50:50ರ ರಿಯಾಯಿತಿಯನ್ನು ಸೋಲಾರ್ ಬೇಲಿ ನಿರ್ಮಾಣವನ್ನು ಕೈಗೊಳ್ಳಲು ಅರಣ್ಯ ಇಲಾಖೆಯಿಂದ ಶೇ 50 ರಷ್ಟು ಧನ ಸಹಾಯ ನೀಡಲಾಗುತ್ತಿದ್ದು 2019-20ನೇ ಸಾಲಿನಲ್ಲಿ 4.754 ಕಿ.ಮೀ. ಕಾಮಗಾರಿ ಪ್ರಗತಿಯಲ್ಲಿದೆ.
4. ಕಾಡಾನೆ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು 2019-20ನೇ ಸಾಲಿನಲ್ಲಿ 13.42 ಕಿ.ಮೀ. ರೈಲ್ವೆ ಹಳಿಗಳ ಬ್ಯಾರಿಕೇಡ್ ನಿರ್ಮಾಣ ಮಾಡಲು ಉದ್ದೇಶಿಸಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.
5. ಕೊಡಗು ಜಿಲ್ಲೆಯ ಅರಣ್ಯ ವೃತ್ತದ ವ್ಯಾಪ್ತಿಯ ವಲಯಗಳಲ್ಲಿ ಕಾಡಾನೆ ಹಾವಳಿಯನ್ನು ತುರ್ತು ನಿರ್ವಹಣೆ ರಾಪಿಡ್ ರೆಸ್ಪಾನ್ಸ್ ತಂಡ (ಆರ್.ಆರ್.ಟಿ) 12 ಸಂಖ್ಯೆ ತಂಡಗಳನ್ನು ರಚಿಸಿ ಕಾರ್ಯನಿರ್ವಹಿಸಲಾಗುತ್ತಿದೆ.
6. ಆಯ್ದ ವಲಯಗಳಲ್ಲಿ 21 ಕಾಡಾನೆಗಳನ್ನು ಮರಳಿ ಕಾಡಿಗೆ ಓಡಿಸುವ ತಂಡ ರಚನೆ ಮಾಡಲಾಗಿರುತ್ತದೆ.
7. ಕಾಡಾನೆ ಇರುವಿಕೆ ಅವುಗಳ ಚಲನವಲನಗಳ ಬಗ್ಗೆ ಸಾರ್ವಜನಿಕರಿಗೆ ರೈತರಿಗೆ ಮಾಹಿತಿ ನೀಡುವ SMS Alert System ಕಾರ್ಯ ನಿರ್ವಹಿಸುತ್ತಿದೆ.
8. ವನ್ಯಪ್ರಾಣಿಗಳ ದಾಳಿಯಿಂದ ಭಾದಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ.
9. ಕೊಡಗು ಜಿಲ್ಲೆಯಲ್ಲಿ 2014 ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿರುತ್ತದೆ.
10. ಕೊಡಗು ಜಿಲ್ಲೆಯಲ್ಲಿ 9 ಆನೆಗಳಿಗೆ ರೇಡಿಯೋ ಕಾಲರ್‌ಗಳನ್ನು ಅಳವಡಿಸಿ ಅವುಗಳ ಚಲನ ವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.

11. ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ 31 ಎಫ್ ಪಿ ಸಿ 2016, ಬೆಂಗಳೂರು ದಿನಾಂಕ: 07-08-2017ರನ್ವಯ ಕೊಡಗು ಜಿಲ್ಲೆಯಲ್ಲಿ ಮಾನವ-ವನ್ಯಜೀವಿ ಸಂಘರ್ಷದಿಂದ ಭಾದಿತರಾದ ವ್ಯಕ್ತಿಗಳಿಗೆ ಸಾಮಾಜಿಕ ಮತ್ತು ಆರ್ಥಿಕ ಬೆಂಬಲ ನೀಡುವುದರ ಜೊತೆಗೆ ಸದರಿ ಉದ್ದೇಶವನ್ನು ಈಡೇರಿಸಲು ಅಗತ್ಯವಿರುವ ಮೂಲ ಸೌಕರ್ಯಗಳನ್ನು ಒದಗಿಸುವ ಉದ್ದೇಶದಿಂದ "ಕೊಡಗು ಮಾನವ-ವನ್ಯಪ್ರಾಣಿ ಸಂಘರ್ಷ ಉಪಶಮನ ಪ್ರತಿಷ್ಠಾನ" ವನ್ನು ವೃತ್ತ ಮಟ್ಟದಲ್ಲಿ ಸ್ಥಾಪಿಸಲಾಗಿದೆ.

**ಸಂಖ್ಯೆ: ಎಫ್‌ಇಇ 17 ಎಫ್‌ಡಬ್ಲ್ಯೂಎಲ್ 2022**

**(ಉಮೇಶ್ ವಿ.ಕತ್ತಿ)**
**ಅರಣ್ಯ ಆಹಾರ, ನಾಗರಿಕ ಸರಬರಾಜು**
**ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು**